# All India Radio: Bangalore
# National Bulletins In Kannada
# 21.06.2025 / 19.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ; ದೇಶದ ವಿವಿದೆಡೆ ರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಹಲವು ಗಣ್ಯರು ಭಾಗಿ

೨. ಮತಗಟ್ಟೆ ವಿಡಿಯೋ ನೀಡಿದರೆ ಮತದಾರರ ಖಾಸಗಿತನಕ್ಕೆ ಧಕ್ಕೆ- ಚುನಾವಣಾ ಆಯೋಗ

೩. ಏರ್ ಇಂಡಿಯಾ ಸಿಬ್ಬಂದಿ ಕರ್ತವ್ಯ ಲೋಪ ಹಿನ್ನೆಲೆ ; ಮೂವರು ಅಧಿಕಾರಿಗಳನ್ನು ವಜಾಗೊಳಿಸಲು ಡಿಜಿಸಿಎ ಆದೇಶ

೪. ಭಾರತ ಇಂಗ್ಲೆಂಡ್ ಮೊದಲ ಟೆಸ್ಟ್ - ದಿಢೀರ್ ಕುಸಿತ ಕಂಡ ಟೀಂ ಇಂಡಿಯಾ - ೪೭೧ ರನ್ ಗಳಿಗೆ ಆಲೌಟ್

<><*<><>*><>

ಅಂತಾರಾಷ್ಟ್ರೀಯ ಯೋಗ ದಿನವಾದ ಇಂದು ಜಗತ್ತಿನಾದ್ಯಂತ ಯೋಗ ದಿನಾಚರಣೆ ಆಚರಿಸಿದ ಬಗ್ಗೆ ವರದಿಗಳು ಬರುತ್ತಿವೆ. ೧೧ ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯನ್ನು ಸಂಸ್ಕೃತಿ ಸಚಿವಾಲಯವು ದೇಶಾದ್ಯಂತ ೧೦೦ ಪ್ರವಾಸಿ ತಾಣಗಳು ಮತ್ತು ೫೦ ಕ್ಕೂ ಹೆಚ್ಚು ಸಾಂಸ್ಕೃತಿಕ ತಾಣಗಳಲ್ಲಿ ಆಯೋಜಿಸಿತ್ತು.

ರಾಷ್ಟ್ರಪತಿ ದ್ರೌಪದಿ ಮುರ್ಮು ಡೆಹ್ರಾಡೂನ್‌ನಲ್ಲಿ ನಡೆದ ಸಾಮೂಹಿಕ ಯೋಗ ಪ್ರದರ್ಶನದಲ್ಲಿ ಭಾಗವಹಿಸಿದರು. ಈ ವೇಳೆ ಮಾತನಾಡಿದ ಯೋಗವು ಆರೋಗ್ಯಕರ ಜೀವನವನ್ನು ನಡೆಸುವ ಕಲೆಯಾಗಿದ್ದು, ಮನುಷ್ಯನ ದೇಹ, ಮನಸ್ಸು ಮತ್ತು ಒಟ್ಟಾರೆ ವ್ಯಕ್ತಿತ್ವಕ್ಕೆ ಪ್ರಯೋಜನ ನೀಡಲಿದೆ ಎಂದು ಹೇಳಿದರು.

ವಿಶಾಖಪಟ್ಟಣದಲ್ಲಿ ನಡೆದ ೧೧ ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ನೇತೃತ್ವ ವಹಿಸಿದ್ದ ಪ್ರಧಾನಿ, ಇಂದು ಇಡೀ ಜಗತ್ತು ಒಂದು ರೀತಿಯ ಒತ್ತಡವನ್ನು ಎದುರಿಸುತ್ತಿದೆ. ಅಂತಹ ಪರಿಸ್ಥಿತಿಯಲ್ಲಿ ಯೋಗವು ನಮಗೆ ಶಾಂತಿಯತ್ತ ಮಾರ್ಗದರ್ಶನ ನೀಡುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

"ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ ಎಂಬದು ಈ ವರ್ಷದ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಘೋಷ ವಾಕ್ಯವಾಗಿದೆ. ವರ್ತಮಾನ ಮತ್ತು ಭವಿಷ್ಯದ ಪೀಳಿಗೆಗೆ ಸಂತೋಷದಾಯಕ ಮತ್ತು ಆರೋಗ್ಯಕರ ಭವಿಷ್ಯವನ್ನು ಖಚಿತಪಡಿಸಿಕೊಳ್ಳಲು ಜಗತ್ತು ಹೇಗೆ ಒಟ್ಟಿಗೆ ಬರುತ್ತದೆ ಎಂಬುದನ್ನು ಇದು ನೆನಪಿಸುತ್ತದೆ ಎಂದು ಪ್ರಧಾನಿ ಮೋದಿ ಹೇಳಿದರು.

ವಿಶಾಖಪಟ್ಟಣಂ ಕಡಲ ತೀರದಲ್ಲಿ ಇಂದು ನಡೆದ ೧೧ ನೇ ಅಂತಾರಾಷ್ಟ್ರೀಯ ಯೋಗ ದಿನವನ್ನು ಅದ್ದೂರಿಯಾಗಿ ಆಚರಿಸಲಾಯಿತು. ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು, ಆಯುಷ್ ಖಾತೆ ರಾಜ್ಯ ಸಚಿವ ಪ್ರತಾಪ್‌ರಾವ್ ಜಾಧವ್ ಉಪಸ್ಥಿತರಿದ್ದರು. ಸುಮಾರು ೩ ಲಕ್ಷ ಜನರು ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ನೂತನ ಗಿನ್ನಿಸ್ ವಿಶ್ವದಾಖಲೆ ನಿರ್ಮಿಸಿದೆ.

ಇದಕ್ಕೂ ಮುನ್ನ ೧೧ನೇ ಅಂತಾರಾಷ್ಟ್ರೀಯ ಯೋಗ ದಿನವನ್ನು ಗುರುತಿಸುವ ಅಂಚೆ ಚೀಟಿಯನ್ನು ಪ್ರಧಾನಿ ನರೇಂದ್ರ ಮೋದಿ ಬಿಡುಗಡೆ ಮಾಡಿದರು.

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಸಂಸತ್ತಿನ ಆವರಣದಲ್ಲಿ ೧೧ ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ನೇತೃತ್ವ ವಹಿಸಿದ್ದರು.

ನವದೆಹಲಿಯ ಪುಸಾ ಕ್ಯಾಂಪಸ್‌ನಲ್ಲಿ ನಡೆದ ಸಾಮೂಹಿಕ ಯೋಗ ಕಾರ್ಯಕ್ರಮದಲ್ಲಿ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಭಾಗವಹಿಸಿದ್ದರು.

'ಯೋಗ ಸಂಗಮ' ಉಪಕ್ರಮದಡಿಯಲ್ಲಿ ದೇಶಾದ್ಯಂತ ೧೦ ಲಕ್ಷಕ್ಕೂ ಹೆಚ್ಚು ಸ್ಥಳಗಳಲ್ಲಿ ಯೋಗ ಕಾರ್ಯಕ್ರಮ ನಡೆಯಿತು. ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ನವದೆಹಲಿಯ ಕರ್ತವ್ಯ ಪಥದಲ್ಲಿ ಕೇಂದ್ರ ಸಚಿವ ಜೆ.ಪಿ.ನಡ್ಡಾ, ಇಂದು ಯೋಗ ಪ್ರದರ್ಶನ ನೀಡಿದರು.

ನವದೆಹಲಿಯ ಆಕಾಶವಾಣಿ ಪ್ರಧಾನ ಕಚೇರಿಯಲ್ಲಿ ವಿಶೇಷ ಯೋಗ ಅಧಿವೇಶನವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಆಕಾಶವಾಣಿ ಮಹಾನಿರ್ದೇಶಕಿ ಡಾ. ಪ್ರಜ್ಞಾ ಪಾಲಿವಾಲ್ ಗೌರ್, ಎಡಿಜಿ ಎಲ್.ಮಧು ನಾಗ್, ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗವಹಿಸಿ, ಯೋಗಾಸನಗಳನ್ನು ಅಭ್ಯಾಸ ಮಾಡಿದರು.

ಲಡಾಖ್‌ನ ಕಾರ್ಗಿಲ್‌ನ ಖ್ರೀ ಸುಲ್ತಾನ್ ಚೊ ಕ್ರೀಡಾ ಕ್ರೀಡಾಂಗಣದಲ್ಲಿಂದು ಅಂತಾರಾಷ್ಟ್ರೀಯ ಯೋಗ ದಿನವನ್ನು ಉತ್ಸಾಹದಿಂದ ಆಚರಿಸಲಾಯಿತು.

ಆಯುಷ್ ಇಲಾಖೆ ಸಂಯುಕ್ತಾಶ್ರಯದಲ್ಲಿ ಬೆಂಗಳೂರಿನ ವಿಧಾನಸೌಧ ಮುಂಭಾಗದಲ್ಲಿ ಆಯೋಜಿಸಿರುವ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಭಾಗವಹಿಸಿದ್ದರು.

ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ವಿಶ್ವ ಪರಂಪರೆಯ ತಾಣವಾದ ವಿರೂಪಾಕ್ಷ ದೇವಸ್ಥಾನದ ಆವರಣ ಪಟ್ಟದಕಲ್ಲಿನಲ್ಲಿ ನಡೆದ ಅಂತಾರಾಷ್ಟ್ರೀಯ ಯೋಗದಿನದಲ್ಲಿ ಪಾಲ್ಗೊಂಡರು.

ಸಚಿವ ಕುಮಾರಸ್ವಾಮಿ, ತಮಿಳುನಾಡಿನ ಸೇಲಂ ಉಕ್ಕು ಸ್ಥಾವರದ ಆವರಣದಲ್ಲಿ ಆಯೋಜಿಸಿದ್ದ ಯೋಗದಿನದಲ್ಲಿ ಭಾಗವಹಿಸಿದ್ದರು.

ಬೆಂಗಳೂರಿನ ಟಿಪ್ಪು ಅರಮನೆಯಲ್ಲಿ ನಡೆದ ಯೋಗ ದಿನಾಚರಣೆಯಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಸಾರ್ವಜನಿಕರೊಂದಿಗೆ ಯೋಗ ಮಾಡಿದರು.

ಇನ್ನೊಂದೆಡೆ ಕೇಂದ್ರ ಸಚಿವ ಸೋಮಣ್ಣ ಹಳೆಬೀಡಿನಲ್ಲಿ ನಡೆದ ಯೋಗಾದಿನಾಚರಣೆಯಲ್ಲಿ ಪಾಲ್ಗೊಂಡರು.

ಶ್ರೀಲಂಕಾದ ಐತಿಹಾಸಿಕ ಸ್ವಾತಂತ್ರ್ಯ ಚೌಕದಲ್ಲಿ ಅಂತಾರಾಷ್ಟ್ರೀಯ ಯೋಗ ದಿನ ಆಚರಿಸಲಾಯಿತು. ಶ್ರೀಲಂಕಾ ಸರ್ಕಾರದ ಹಿರಿಯ ಸಚಿವರು, ಮಾಜಿ ಕ್ರಿಕೆಟ್ ಆಟಗಾರರು, ಭಾರತೀಯ ರಾಯಭಾರಿ ಕಚೇರಿಯ ಪ್ರತಿನಿಧಿಗಳು ಸೇರಿದಂತೆ ಯೋಗಪಟುಗಳು ಭಾಗವಹಿಸಿದ್ದರು.

<><*<><>*><>

ಮತಗಟ್ಟೆಗಳ ವಿಡಿಯೋ ನೀಡುವುದರಿಂದ ಮತದಾರರ ಖಾಸಗಿತನಕ್ಕೆ ಧಕ್ಕೆಯಾಗಲಿದೆ ಚುನಾವಣಾ ಆಯೋಗ ತಿಳಿಸಿದೆ.

೪೫ ದಿನಗಳನ್ನು ಮೀರಿ ಮತಗಟ್ಟೆಗಳ ಸಿಸಿಟಿವಿ ದೃಶ್ಯಗಳನ್ನು ಸಂರಕ್ಷಿಸಲು ಹೊಸ ಒತ್ತಡವನ್ನು ಎದುರಿಸುತ್ತಿರುವ ಚುನಾವಣಾ ಆಯೋಗ ತನ್ನ ಪ್ರಸ್ತುತ ನೀತಿಗೆ ಬದ್ಧವಾಗಿದೆ. ಮತಗಟ್ಟೆಯ ವಿಡಿಯೋವನ್ನು ಸಾರ್ವಜನಿಕಗೊಳಿಸುವುದರಿಂದ ಮತದಾರರ ಗೌಪ್ಯತೆಗೆ ಅಪಾಯ ಉಂಟಾಗಬಹುದು. ಇದು ಕಾನೂನು ರಕ್ಷಣೆಗಳನ್ನು ಉಲ್ಲಂಘಿಸಬಹುದು ಎಂದು ಚುನಾವಣಾ ಆಯೋಗ ಎಚ್ಚರಿಸಿದೆ.

ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಮಹಾರಾಷ್ಟ್ರ ಸೇರಿದಂತೆ ಎಲ್ಲಾ ರಾಜ್ಯಗಳ ಲೋಕಸಭೆ ಮತ್ತು ವಿಧಾನಸಭಾ ಚುನಾವಣೆಗಳಿಗೆ ಕ್ರೋಢೀಕೃತ, ಡಿಜಿಟಲ್, ಮತದಾರರ ಪಟ್ಟಿಯನ್ನು ಪ್ರಕಟಿಸುವಂತೆ ಚುನಾವಣಾ ಆಯೋಗಕ್ಕೆ ಮನವಿ ಮಾಡಿದ್ದರು.

<><*<><>*><>

ಏರ್ ಇಂಡಿಯಾದ ಸಿಬ್ಬಂದಿ ವೇಳಾಪಟ್ಟಿ ಮತ್ತು ರೋಸ್ಟರಿಂಗ್‌ಗೆ ಸಂಬಂಧಿಸಿದ ಎಲ್ಲಾ ಕರ್ತವ್ಯ ಮತ್ತು ಜವಾಬ್ದಾರಿಗಳಿಂದ ಮೂವರು ಅಧಿಕಾರಿಗಳನ್ನು ವಜಾಗೊಳಿಸುವಂತೆ ನಾಗರಿಕ ವಿಮಾನಯಾನ ನಿರ್ದೇಶನಾಲಯ (ಡಿಜಿಸಿಎ) ಆದೇಶ ಹೊರಡಿಸಿದೆ.

ಈ ಅಧಿಕಾರಿಗಳ ವಿರುದ್ಧ ಆಂತರಿಕ ಶಿಸ್ತಿನ ಕ್ರಮಗಳನ್ನು ಕೈಗೊಳ್ಳುವಂತೆ ಮತ್ತು ಪ್ರಕ್ರಿಯೆಗಳ ಫಲಿತಾಂಶವನ್ನು ಹತ್ತು ದಿನಗಳಲ್ಲಿ ವರದಿ ಮಾಡುವಂತೆ ವಿಮಾನಯಾನ ಸಂಸ್ಥೆಗೆ ಸೂಚಿಸಲಾಗಿದೆ.

ಕಾರ್ಯಾಚರಣೆಯ ಲೋಪಗಳಿಗೆ ಈ ಅಧಿಕಾರಿಗಳು ಜವಾಬ್ದಾರರು ಎಂದು ಡಿಜಿಸಿಎ ಹೇಳಿಕೆಯಲ್ಲಿ ತಿಳಿಸಿದ್ದು, ಅನಧಿಕೃತ ಮತ್ತು ಅನುಸರಣೆಯಿಲ್ಲದ ಸಿಬ್ಬಂದಿ ಜೋಡಣೆ, ಕಡ್ಡಾಯ ಪರವಾನಗಿ ಉಲ್ಲಂಘನೆ ಮತ್ತು ವೇಳಾಪಟ್ಟಿ ಪ್ರೋಟೋಕಾಲ್ ಮತ್ತು ಮೇಲ್ವಿಚಾರಣೆಯಲ್ಲಿ ವ್ಯವಸ್ಥಿತ ವೈಫಲ್ಯಗಳು ಸೇರಿದಂತೆ ಗಂಭೀರ ಮತ್ತು ಪುನರಾವರ್ತಿತ ಲೋಪಗಳಲ್ಲಿ ಈ ಅಧಿಕಾರಿಗಳು ಭಾಗಿಯಾಗಿದ್ದಾರೆ ಎಂದು ಡಿಜಿಸಿಎ ಹೇಳಿದೆ.

<><*<><>*><>

ಇರಾನ್ ಮತ್ತು ಇಸ್ರೇಲ್ ನಡುವಿನ ಸಂಘರ್ಷ ಎರಡನೇ ವಾರಕ್ಕೆ ಕಾಲಿಡುತ್ತಿದ್ದಂತೆ, ಎರಡೂ ದೇಶಗಳು ಹೊಸ ವಾಯುದಾಳಿಗಳನ್ನು ವಿನಿಮಯ ಮಾಡಿಕೊಂಡಿವೆ, ರಾಜತಾಂತ್ರಿಕ ಪ್ರಯತ್ನಗಳು ಅರ್ಥಪೂರ್ಣ ಪ್ರಗತಿಯ ಲಕ್ಷಣಗಳನ್ನು ತೋರಿಸುತ್ತಿಲ್ಲ. ಜಿನೀವಾದಲ್ಲಿ ನಡೆದ ಸಂಘರ್ಷವನ್ನು ಶಮನಗೊಳಿಸಲು ವಿಫಲ ಪ್ರಯತ್ನಗಳ ನಂತರ ಇದು ಸಂಭವಿಸಿದೆ, ಅಲ್ಲಿ ಯುರೋಪಿಯನ್ ರಾಜತಾಂತ್ರಿಕರು ನಿನ್ನೆ ತಮ್ಮ ಇರಾನಿನ ರಾಜತಾಂತ್ರಿಕರನ್ನು ಭೇಟಿಯಾದರು, ಇಸ್ರೇಲ್ ದಾಳಿಗೆ ಒಳಗಾಗುತ್ತಿರುವಾಗ ಇರಾನ್ ಅಮೆರಿಕದೊಂದಿಗೆ ಮತ್ತೆ ಮಾತುಕತೆ ನಡೆಸುವುದಿಲ್ಲ  ವಿದೇಶಾಂಗ ಸಚಿವ ಅಬ್ಬಾಸ್ ಅರಾಘ್ಚಿ ಎಂದು ತಿಳಿಸಿದ್ದಾರೆ.

ಇಸ್ರೇಲ್ ಇರಾನ್ ವಿರುದ್ಧ ತನ್ನ ಮಿಲಿಟರಿ ಕಾರ್ಯಾಚರಣೆಯನ್ನು ಹೆಚ್ಚಿಸುತ್ತಿರುವುದರಿಂದ ಈ ಪ್ರದೇಶದಲ್ಲಿ ಉದ್ವಿಗ್ನತೆ ಹೆಚ್ಚುತ್ತಲೇ ಇದೆ. ಶನಿವಾರ, ಇಸ್ರೇಲ್ ಪಡೆಗಳು ಇರಾನ್‌ನ ಅತಿದೊಡ್ಡ ಪರಮಾಣು ಸೌಲಭ್ಯವಾದ ಮಧ್ಯ ಇರಾನ್‌ನಲ್ಲಿರುವ ಇಸ್ಫಹಾನ್ ಪರಮಾಣು ಸಂಶೋಧನಾ ಸಂಕೀರ್ಣವನ್ನು ಗುರಿಯಾಗಿಸಿಕೊಂಡಿವೆ ಎಂದು ವರದಿಗಳು ತಿಳಿಸಿದ್ದು, ಯಾವುದೇ ಅಪಾಯಕಾರಿ ವಸ್ತುಗಳ ಸೋರಿಕೆ ವರದಿಯಾಗಿಲ್ಲ. ಅಧಿಕಾರಿಗಳು ಮುನ್ನೆಚ್ಚರಿಕೆಯಾಗಿ ನಿವಾಸಿಗಳನ್ನು ಆ ಪ್ರದೇಶದಿಂದ ದೂರವಿರಲು ಸೂಚಿಸಿದ್ದಾರೆ.

ಇರಾನಿನ ನಗರವಾದ ಕೋಮ್‌ನಲ್ಲಿ, ವಸತಿ ಕಟ್ಟಡದ ಮೇಲೆ ನೇರ ದಾಳಿ ನಡೆದಿದ್ದು, ಇಬ್ಬರು ಸಾವನ್ನಪ್ಪಿದ್ದಾರೆ ಮತ್ತು ಇತರ ನಾಲ್ವರು ಗಾಯಗೊಂಡಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

ಇತ್ತೀಚಿನ ದಾಳಿಗಳು ಇರಾನಿನ ಕ್ಷಿಪಣಿ ಸಂಗ್ರಹ ಮತ್ತು ಉಡಾವಣಾ ತಾಣಗಳನ್ನು ಗುರಿಯಾಗಿಸಿಕೊಂಡಿವೆ ಎಂದು ಇಸ್ರೇಲ್ ರಕ್ಷಣಾ ಪಡೆಗಳು ಹೇಳುತ್ತವೆ. ಇಸ್ರೇಲ್ ಜನರಲ್ ಸ್ಟಾಫ್ ಮುಖ್ಯಸ್ಥ ಇಯಾಲ್ ಜಮೀರ್ ಅವರು ವೀಡಿಯೊ ಭಾಷಣದಲ್ಲಿ, ದೇಶವು ಇರಾನ್ ವಿರುದ್ಧ "ದೀರ್ಘಕಾಲದ ಹೋರಾಟ"ಕ್ಕೆ ಸಿದ್ಧವಾಗಬೇಕು ಎಂದು ಎಚ್ಚರಿಸಿದರು, ಇದು ಈ ಸಂಘರ್ಷವು ಮುಂಬರುವ ದಿನಗಳನ್ನು ತೀವ್ರವಾಗಬಹುದು ಎಂಬುದರ ಸಂಕೇತವಾಗಿದೆ.

೫೭ ಸದಸ್ಯ ರಾಷ್ಟ್ರಗಳನ್ನು ಪ್ರತಿನಿಧಿಸುವ ಇಸ್ಲಾಮಿಕ್ ಸಹಕಾರ ಸಂಸ್ಥೆ ಶನಿವಾರ ಇಸ್ತಾನ್‌ಬುಲ್‌ನಲ್ಲಿ ನಡೆಸಿದ ಸಭೆಯಲ್ಲಿ ಇರಾನ್‌ನ ವಿದೇಶಾಂಗ ಸಚಿವರು ಹಾಜರಿದ್ದರು. ಜಿನೀವಾದಲ್ಲಿ, ಇರಾನ್ ಮತ್ತು ಬ್ರಿಟನ್, ಫ್ರಾನ್ಸ್ ಮತ್ತು ಜರ್ಮನಿ ನಡುವಿನ ಮಾತುಕತೆಗಳು ವಿಫಲವಾದವು. ಇಸ್ರೇಲಿ ದಾಳಿಯ ಹಿನ್ನೆಲೆಯಲ್ಲಿ ತನ್ನ ಪರಮಾಣು ಕಾರ್ಯಕ್ರಮದ ಕುರಿತು ಮಾತುಕತೆಗಳು ಮುಂದುವರಿಯಲು ಸಾಧ್ಯವಿಲ್ಲ ಎಂದು ಟೆಹ್ರಾನ್ ಸ್ಪಷ್ಟಪಡಿಸಿದೆ.

<><*<><>*><>

ಪ್ರಾದೇಶಿಕ ಒಗ್ಗಟ್ಟಿನ ಗಮನಾರ್ಹ ಸೂಚನೆಯಾಗಿ, ಭಾರತವು ಆಪರೇಷನ್ ಸಿಂಧು ಅಡಿಯಲ್ಲಿ ಇರಾನ್‌ನಲ್ಲಿ ಸಿಲುಕಿರುವ ನೇಪಾಳ ಮತ್ತು ಶ್ರೀಲಂಕಾದ ನಾಗರಿಕರನ್ನು ಸ್ಥಳಾಂತರಿಸುವ ಪ್ರಯತ್ನಗಳನ್ನು ವಿಸ್ತರಿಸಿದೆ. ನೇಪಾಳ ಮತ್ತು ಶ್ರೀಲಂಕಾ ಸರ್ಕಾರಗಳ ಔಪಚಾರಿಕ ವಿನಂತಿಯ ನಂತರ ಈ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ತಿಳಿಸಲಾಗಿದೆ.

ಟೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಈಗ ಭಾರತೀಯ ನಾಗರಿಕರೊಂದಿಗೆ ದಕ್ಷಿಣ ಏಷ್ಯಾದ ಎರಡು ನೆರೆಹೊರೆಯ ರಾಷ್ಟ್ರಗಳ ಪ್ರಜೆಗಳಿಗೆ ಸಹಾಯ ಮತ್ತು ಸ್ಥಳಾಂತರಿಸುವಿಕೆಯನ್ನು ಸಂಘಟಿಸುತ್ತದೆ.

ಇರಾನ್‌ನಲ್ಲಿರುವ ಶ್ರೀಲಂಕಾದ ಪ್ರಜೆಗಳು ಟೆಲಿಗ್ರಾಮ್ ಮೂಲಕ ಅಥವಾ ಎಕ್ಸ್ ಪೋಸ್ಟ್‌ನಲ್ಲಿ ಹಂಚಿಕೊಳ್ಳಲಾದ ತುರ್ತು ಸಂಖ್ಯೆಗಳ ಮೂಲಕ ಭಾರತೀಯ ರಾಯಭಾರ ಕಚೇರಿಯನ್ನು ಸಂಪರ್ಕಿಸಲು ಸೂಚಿಸಲಾಗಿದೆ.

<><*<><>*><>

ಲೀಡ್ಸ್‌ನಲ್ಲಿ ನಡೆಯುತ್ತಿರುವ ಮೊದಲ ಟೆಸ್ಟ್ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಟೀಂ ಇಂಡಿಯಾ ೪೭೧ ರನ್‌ಗಳಿಗೆ ತನ್ನ ಮೊದಲ ಇನ್ನಿಂಗ್ಸ್ ಮುಗಿಸಿದೆ.

ತಂಡದ ಪರ ಮೂವರು ಬ್ಯಾಟರ್‌ಗಳು ಭರ್ಜರಿ ಶತಕ ಸಿಡಿಸುವ ಮೂಲಕ ತಂಡವನ್ನು ಈ ಸ್ಪರ್ಧಾತ್ಮಕ ಮೊತ್ತಕ್ಕೆ ಕೊಂಡೊಯ್ದಿದ್ದಾರೆ. ೩ ವಿಕೆಟ್ ನಷ್ಟಕ್ಕೆ ೩೫೯ ರನ್ ಬಾರಿಸಿ ಮೊದಲ ದಿನದಾಟವನ್ನು ಮುಗಿಸಿದ್ದ ಭಾರತ ಎರಡನೇ ದಿನದಾಟದಲ್ಲಿ ೨ನೇ ಸೆಷನ್ ಮುಗಿಯುವುದಕ್ಕೆ ಮುನ್ನವೇ ಉಳಿದ ೭ ವಿಕೆಟ್‌ಗಳನ್ನು ಕಳೆದುಕೊಂಡು ತಂಡದ ಖಾತೆಗೆ ೧೧೨ ರನ್ ಸೇರಿಸಲಷ್ಟೇ ಶಕ್ತವಾಯಿತು. ಎರಡನೇ ದಿನದಾಟದಲ್ಲಿ ಉಪನಾಯಕ ರಿಷಭ್ ಪಂತ್ ಶತಕ ಸಿಡಿಸಿದ್ದಾರೆ. ಉಳಿದ ಆಟಗಾರರು ಉತ್ತಮ ಪ್ರದರಶನ ನೀಡುವಲ್ಲಿ ವಿಫಲರಾದರು.

ಇತ್ತೀಚಿನ ವರದಿ ಬಂದಾಗ ಇಂಗ್ಲೆಂಡ್ ೧ ವಿಕೆಟ್ ನಷ್ಟಕ್ಕೆ ೯ ರನ್ ಗಳಿಸಿ ಆಡುತ್ತಿದೆ **<><*<><>*><>**